ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್-03/2024 (ಕೆಕೆ) ದಿನಾಂಕ: 05-03-2024
ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್-03/2024 (ಆರ್‌ಪಿಸಿ) ದಿನಾಂಕ: 05-03-2024

## ಅಧಿಸೂಚನೆ

ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ ಖಾಲಿ ಇರುವ ವಿವಿಧ ವೃಂದದ ಹುದ್ದೆಗಳಿಗೆ ನೇರ ನೇಮಕಾತಿ

ವ್ಯವಸ್ಥಾಪಕ ನಿರ್ದೇಶಕರು, ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ ಇವರ ದಿನಾಂಕ 20.02.2023, 22-02-2024, ರ ಪತ್ರದ ಅನ್ವಯ ಖಾಲಿ ಇರುವ ಉಳಿಕೆ ಮೂಲ ವೃಂದ ಮತ್ತು ಕಲ್ಯಾಣ ಕರ್ನಾಟಕ (ಸ್ಥಳೀಯ) ವೃಂದದ ವಿವಿಧ ವೃಂದದ ಹುದ್ದೆಗಳ ನೇರ ನೇಮಕಾತಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲಾಗುವುದು. ಅಭ್ಯರ್ಥಿಗಳು ಪ್ರಾಧಿಕಾರವು ನಡೆಸುವ ಲಿಖಿತ ಪರೀಕ್ಷೆಗೆ ಹಾಜರಾಗಬೇಕು.

ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ **"GTTC- Recruitment- 2024"** ಲಿಂಕ್ ಅನ್ನು ಆಯ್ಕೆ ಮಾಡಿ ಆನ್ ಲೈನ್ ಮುಖಾಂತರ ಅರ್ಜಿಯನ್ನು ಭರ್ತಿಮಾಡಬೇಕು. ಪೆನ್ ಮತ್ತು ಪೇಪರ್ ಉಪಯೋಗಿಸಿ ಅರ್ಜಿಯನ್ನು ಸಲ್ಲಿಸುವ ವಿಧಾನ ಇರುವುದಿಲ್ಲ.

| | |
|---|---|
| ವಿವರವಾದ ಅಧಿಸೂಚನೆ ಪ್ರಕಟಿಸಲಾಗುವ ದಿನಾಂಕ | 24.03.2024 |
| ಆನ್‌ಲೈನ್ ಮುಖಾಂತರ ಅರ್ಜಿಸಲ್ಲಿಸಲು ಪ್ರಾರಂಭಿಕ ದಿನಾಂಕ | 24.03.2024 ರಿಂದ |
| ಆನ್‌ಲೈನ್ ಮುಖಾಂತರ ಅರ್ಜಿಸಲ್ಲಿಸಲು ಕೊನೆಯ ದಿನಾಂಕ | 23.04.2024 ವರೆಗೆ |
| ಆನ್‌ಲೈನ್ ಮುಖಾಂತರ ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ | 25.04.2024 (ಬ್ಯಾಂಕ್ ಕೆಲಸದ ವೇಳೆ) ವರೆಗೆ. |

1. **ಒಟ್ಟು ಹುದ್ದೆಗಳು: 74+2 = 76**
2. **ಶೈಕ್ಷಣಿಕ ವಿದ್ಯಾರ್ಹತೆ, ವೇತನ ಶ್ರೇಣಿ, ಅಭ್ಯರ್ಥಿಗಳ ಅರ್ಹತೆ ವಿವರ, ವಯೋಮಿತಿ, ಸ್ಪರ್ಧಾತ್ಮಕ ಪರೀಕ್ಷೆ, ಆಯ್ಕೆ ಪ್ರಕ್ರಿಯೆ ಮತ್ತು ನೇಮಕಾತಿಯ ವಿವರ ಹಾಗೂ ಪ್ರವರ್ಗವಾರು ಹುದ್ದೆಗಳ ವಿವರಗಳು ಹಾಗು ಇನ್ನಿತರ ಮಾಹಿತಿಗಾಗಿ ಕೆಇಎ ವೆಬ್ ಸೈಟ್ http://kea.kar.nic.in ಗೆ ಭೇಟಿ ನೀಡಿ ವಿವರವಾದ ಅಧಿಸೂಚನೆಯನ್ನು ಓದಿಕೊಳ್ಳುವುದು.**

**ಗಮನಿಸಿ:**

1. ಕೇವಲ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು, ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗುವುದು ಲಿಖಿತ ಪರೀಕ್ಷೆಯಲ್ಲಿ ಅರ್ಹತೆ ಪಡೆಯುವುದು, ಅಭ್ಯರ್ಥಿಗಳಿಗೆ ಜಿಟಿಟಿಸಿ ಹುದ್ದೆಗಳಿಗೆ ನೇಮಕಾತಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ, ನೇಮಕಾತಿಯು ಸರ್ಕಾರ / ಸಕ್ಷಮ ಪ್ರಾಧಿಕಾರ / ನೇಮಕಾತಿ ಪ್ರಾಧಿಕಾರವು ನಿಗದಿಪಡಿಸಬಹುದಾದ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ.
2. ಮೇಲಿನ ಯಾವುದೇ ನಿಯಮಗಳು / ಕಾರ್ಯವಿಧಾನಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸ ಅಥವಾ ಅಸ್ಪಷ್ಟತೆ ಕಂಡು ಬಂದಲ್ಲಿ, ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 (ತಿದ್ದುಪಡಿಗಳು), ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 (ತಿದ್ದುಪಡಿಗಳು) ಮತ್ತು ಜಿಟಿಟಿಸಿ (ವೃಂದ, ನೇಮಕಾತಿ ಮತ್ತು ಕೆಲವು ಸೇವಾ ಷರತ್ತುಗಳು) ನಿಯಮಗಳು, 2000 ರಲ್ಲಿರುವಂತೆ ಅನ್ವಯಿಸುತ್ತದೆ.

**ಸೂಚನೆ: ಮೇಲ್ಕಂಡ ಹುದ್ದೆಗಳ ಸಂಖ್ಯೆ ಹಾಗೂ ವೃಂದ ತಾತ್ಕಾಲಿಕವಾಗಿದ್ದು, ಬದಲಾವಣೆಯ ಷರತ್ತಿಗೆ ಒಳಪಟ್ಟಿರುತ್ತದೆ.**

(ಎಸ್. ರಮ್ಯ ಭಾ.ಆ.ಸೇ.)
ಕಾರ್ಯನಿರ್ವಾಹಕ ನಿರ್ದೇಶಕರು


**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in